ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 568

ಸದಸ್ಯರ ಹೆಸರು : ಶ್ರೀಮತಿ. ಎಸ್.ವೀಣಾ ಅಚ್ಚಯ್ಯ
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.

ಉತ್ತರಿಸುವ ದಿನಾಂಕ : 17.12.2021.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಕಾಫಿಬೆಳೆಗಾರರಿಗೆ ಕೇಂದ್ರ ಕಾಫಿ ಮಂಡಳಿಯಿಂದ ದೊರೆಯುತ್ತಿದ್ದ ಸಹಾಯಧನ ಸೌಲಭ್ಯ ಸ್ಥಗಿತ ಗೊಂಡಿರುವು ದರಿಂದ, ಕಾಫಿ ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿದೆ.
ಆ)	ಬಂದಿದ್ದಲ್ಲಿ, ಸದರಿ ಸಹಾಯಧನ ಸೌಲಭ್ಯವನ್ನು ಮರುಸ್ಥಾಪಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ;	ಕಾಫಿ ಬೆಳೆಗಾರರು ಎದುರಿಸುತ್ತಿರುವ ಸವಾಲುಗಳನ್ನು ಮನಗಂಡು ಕೇಂದ್ರ ಕಾಫಿಮಂಡಳಿಯು ಕಾಫಿ ಬೆಳೆಗಾರರೊಂದಿಗೆ ಸಮಾಲೋಚಿಸಿ ಸಮಗ್ರ ಕಾಫಿ ಅಭಿವೃದ್ಧಿ ಯೋಜನೆ (Integrated Coffee Development Project) 2021-22ನೇ ಸಾಲಿನಿಂದ 2025-26ನೇ ಸಾಲಿನವರೆಗೆ ಪ್ರಸ್ತಾವನೆ ಸಿದ್ಧಪಡಿಸಿ ಕೇಂದ್ರ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸ ಲಾಗಿರುತ್ತದೆ. ಅನುಮೋದನೆ ನೀರಿಕ್ಷಿಸ ಲಾಗುತ್ತಿದೆ.
ಇ)	ಕಾಫಿ ಬೆಳೆಯು ನಿರಂತರ ಪ್ರಾಕೃತಿಕ ವಿಕೋಪಕ್ಕೆ ತುತ್ತಾಗುತ್ತಿರುವ ಕಾರಣ ದಿಂದಾಗಿ, ಸಂಕಷ್ಟಕ್ಕೆ ಸಿಲುಕಿರುವ ರಾಜ್ಯದ ಕಾಫಿ ಬೆಳೆಗಾರರಿಗೆ ಸಹಾಯಧನ ಸೌಲಭ್ಯವನ್ನು ಮುಂದುವರೆಸಲು ಸರ್ಕಾರ ಈ ಕೂಡಲೇ ಕ್ರಮವಹಿಸುವುದೇ?	ರಾಷ್ಟ್ರೀಯ / ರಾಜ್ಯ ವಿಪತ್ತು ಪರಿಹಾರ ನಿಧಿ (NDRF / SDRF) ಮಾರ್ಗಸೂಚಿಯನ್ವಯ ಪ್ರತಿ ಹೆಕ್ಟೇರ್ ಬಹು ವಾರ್ಷಿಕ ಬೆಳೆಗಳ ರೂ.18000 ಪ್ರತಿ ಹೆ., ರಂತೆ ಪ್ರತಿ ಫಲಾನುಭವಿಗೆ ಗರಿಷ್ಠ 2.00 ಹೆಕ್ಟೇರ್ ವರೆಗೆ ಕಂದಾಯ ಇಲಾಖೆಯ ಮುಖಾಂತರ ಪರಿಹಾರಧನ ವಿತರಿಸಲಾಗುತ್ತದೆ.

HORTI 526 HGM 2021

(ಮುನಿರತ್ನ)
ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.